ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ
BENGALURU CENTRAL UNIVERSITY

Central College Campus, Dr.AmbedkarVeedhi, Bengaluru,
E-mail ID: registrarevlubcu@gmail.com, Ph.No: 22295559

ಸಂಖ್ಯೆ.ಬೆಂ.ಕೇ.ವಿ/ಪರೀಕ್ಷಾ ಶುಲ್ಕ/2018-19/170 **ದಿನಾಂಕ:** 23.07.2019

## ಸುತ್ತೋಲೆ

**ವಿಷಯ:** ಪರೀಕ್ಷಾ ಶುಲ್ಕ ರಿಯಾಯಿತಿ ಪಡೆದ ವಿದ್ಯಾರ್ಥಿಗಳ ಹಾಗೂ ಕಡಿಮೆ ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಮಾಹಿತಿ ಒದಗಿಸುವ ಬಗ್ಗೆ.

*****

ಮೇಲ್ಕಂಡ ವಿಷಯದ ಬಗ್ಗೆ ತಿಳಿಸಲಿಚ್ಛಿಸುವುದೇನೆಂದರೆ, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಕಾಲೇಜುಗಳ Category – I /ST/SC/ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು 2018-19ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್ ಸ್ನಾತಕ ಮತ್ತು ಸ್ನಾತಕೋತ್ತರ ಪರೀಕ್ಷೆಗಳಿಗೆ ಶುಲ್ಕ ಪಾವತಿಸುವಾಗ, ಪರೀಕ್ಷಾ ಶುಲ್ಕದಲ್ಲಿ ರಿಯಾಯಿತಿ ಪಡೆದಿರುತ್ತಾರೆ. ಇವರುಗಳಿಗೆ ಸರ್ಕಾರದಿಂದ ವಿದ್ಯಾರ್ಥಿವೇತನ ಮಂಜೂರಾಗಿದೆಯೇ ಎಂಬುವುದರ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸಲು ಕೋರಿದೆ. Category – I /ST/SC/ ವರ್ಗಗಳ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇತರೆ ವರ್ಗದ ವಿದ್ಯಾರ್ಥಿಗಳು ನಿಗಧಿತ ಶುಲ್ಕಕ್ಕಿಂತ ಕಡಿಮೆ ಶುಲ್ಕ ಪಾವತಿಸಿರುವುದು ವಿಶ್ವವಿದ್ಯಾಲಯದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ತಮ್ಮ ಕಾಲೇಜಿನ ವಿದ್ಯಾರ್ಥಿಗಳು ನಿಗಧಿಪಡಿಸಿರುವ ಪರೀಕ್ಷಾ ಶುಲ್ಕಕ್ಕಿಂತ ಕಡಿಮೆ ಶುಲ್ಕವನ್ನು / ವಿನಾಯಿತಿ ದರದಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸಿದ್ದರೆ ಅಂತಹ ವಿದ್ಯಾರ್ಥಿಗಳ ಪೂರ್ಣ ಪರೀಕ್ಷಾ ಶುಲ್ಕವನ್ನು ದಿನಾಂಕ 10.08.2019ರ ಒಳಗಾಗಿ ಆನ್‌ಲೈನ್ ಮೂಲಕ ವಿಶ್ವವಿದ್ಯಾಲಯ ಖಾತೆಗೆ ವರ್ಗಾಯಿಸುವಂತೆ ಸೂಚಿಸಿದೆ.

M. [signature] 25/7/19
**ಕುಲಸಚಿವರು(ಮೌಲ್ಯಮಾಪನ)**

**ಗೆ,**

ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು.